ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 2300/2022

ಪಿರ್ಯಾದಿ ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರುಃ

1) ಪುಟ್ಟಸ್ವಾಮಿಗೌಡ ಬಿನ್ ಕೆಂಚಪ್ಪ, 85 ವರ್ಷ, (ಮೃತಪಟ್ಟಿರುತ್ತಾರೆ)

2) ನಾಗರತ್ನಮ್ಮ ಕೋಂ ಪುಟ್ಟಸ್ವಾಮಿಗೌಡ, 78 ವರ್ಷ, ವಾಸ ಃ ನಂದಿಬಟ್ಟಲು ಗ್ರಾಮ, ಲಿಂಗದಹಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

-ಃದೋಷಾರೋಪಣೆಃ-

ಶ್ರೀಮತಿ ಊರ್ಮಿಳ.ವಿ., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು 2 ನೇ ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 30.08.2021 ರಂದು ಸಂಜೆ 06.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನ ಗ್ರಾಮದಲ್ಲಿ ಚಾಸಾ-2 ಕೆಂಚಪ್ಪರವರು ಮನೆಯಿಂದ ಹೊರಗಡೆ ಹೋಗಿದ್ದು, ಚಾಸಾ-1 ರುಕ್ಮಿಣಿರವರು ಮನೆಯಲ್ಲಿದ್ದು, ಆ ವೇಳೆಗೆ 2 ನೇ ಆರೋಪಿಯಾದ ನೀವು 1 ನೇ ಆರೋಪಿಯೊಂದಿಗೆ ಸೇರಿ ಸಮಾನ ಉದ್ದೇಶದಿಂದ ಸದರಿ ಮನೆಯ ಹತ್ತಿರ ಬಂದವರೇ, ಸದರಿ ಮನೆಯ ದುರಸ್ತಿ ಕೆಲಸ ಮಾಡುತ್ತಿದ್ದ ಚಾಸಾ-3 ಮತ್ತು 4 ರವರಿಗೆ ಇದು ನಮಗೆ ಸೇರಿದ ಮನೆ, ನೀವು ಯಾಕೆ ಮನೆಯನ್ನು ರಿಪೇರಿ ಮಾಡುತ್ತಿದ್ದೀರಾ, ನಿಲ್ಲಿಸಿ ಎಂದು ಹೇಳಿದ್ದು, ಆಗ ಚಾಸಾ-1 ರವರು ನಾವು ಈಗ ಬಂದು ಮನೆಯನ್ನು ಕಟ್ಟುತ್ತಿಲ್ಲ, 20 ವರ್ಷಗಳಿಂದ ಇಲ್ಲಿಯೇ ವಾಸವಾಗಿರುತ್ತೇವೆ ಎಂದು ಹೇಳಿದ್ದಕ್ಕೆ, ಆರೋಪಿತರಾದ ನೀವು ಈ ಜಾಗ ನಮ್ಮದು, ಇಲ್ಲಿ ಯಾರೂ ಮನೆ ದುರಸ್ಥಿ ಮಾಡುವುದು ಬೇಡ ಎಂದವರೇ, ಚಾಸಾ-1 ರವರಿಗೆ ಸೂಳೇಮುಂಡೆ, ಬೇವರ್ಸಿಮುಂಡೆ ಇತ್ಯಾದಿ ಅವಾಚ್ಯ ಶಬ್ದಗಳಿಂದ ಬೈದು , 2 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಸೂಳೇಮುಂಡೆ, ಬೇವರ್ಸಿ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದಿದ್ದು, ಅದೇ ವೇಳೆಗೆ ಅಲ್ಲಿಗೆ ಬಂದ ಸಾಕ್ಷಿ-2 ರವರಿಗೂ ಸಹ ಆರೋಪಿತರಾದ ನೀವು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ 2 ನೇ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ 2 ನೇ ಆರೋಪಿಯಾದ ನೀವು 1 ನೇ ಆರೋಪಿಯೊಂದಿಗೆ ಸೇರಿ ಸಮಾನ ಉದ್ದೇಶದಿಂದ 1 ನೇ ಆರೋಪಿಯು ಚಾಸಾ-1 ರವರ ಕಲ್ಲಿನಿಂದ ಎಡಭುಜಕ್ಕೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆದಕಾರಣ 2 ನೇ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ 2 ನೇ ಆರೋಪಿಯಾದ ನೀವು 1 ನೇ ಆರೋಪಿಯೊಂದಿಗೆ ಸೇರಿ ಸಮಾನ ಉದ್ದೇಶದಿಂದ ಕೈಗಳಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ 2 ನೇ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ 2 ನೇ ಆರೋಪಿಯಾದ ನೀವು 1 ನೇ ಆರೋಪಿಯೊಂದಿಗೆ ಸೇರಿ ಸಮಾನ ಉದ್ದೇಶದಿಂದ ಚಾಸಾ-1 ಮತ್ತು 2 ರವರಿಗೆ ಮನೆ ರಿಪೇರಿ ಮಾಡಿಕೊಂಡು ಇಲ್ಲಿಯೇ ಇದ್ದರೆ ನಿಮ್ಮನ್ನು ಕೊಲೆ ಮಾಡದೆ ಬಿಡುವುದಿಲ್ಲವೆಂದು ಬೆದರಿಕೆ ಹಾಕಿದ್ದು, ಆದಕಾರಣ 2 ನೇ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 10.03.2025

ಸಹಿ

**(ಊರ್ಮಿಳ.ವಿ)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.